# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 997 |
| 2 | ಸದಸ್ಯರ ಹೆಸರು | ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | 19.12.2018 |
| 4 | ಉತ್ತರಿಸುವ ಸಚಿವರು | ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರವು ಆಡಳಿತದ ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ಜನರಿಗೆ ಅನುಕೂಲ ಒದಗಿಸುವುದರ ಹಿನ್ನೆಲೆಯಲ್ಲಿ ಹೊಸ ತಾಲ್ಲೂಕು ಗಳನ್ನು ರಚಿಸಿದ್ದು, ಈ ತಾಲ್ಲೂಕುಗಳು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸಲಾಗದೆ ಸಮಸ್ಯೆ ಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಬಂದಿದೆ.<br><br>2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ ಸರ್ಕಾರದ ಆದೇಶ ಸಂಖ್ಯೆ: ಕಂಇ 35 ಭೂದಾಖ 2017 ದಿನಾಂಕ: 06.09.2017 ಮತ್ತು ದಿನಾಂಕ: 16.10.2017 ರಲ್ಲಿ 50 ಹೊಸ ತಾಲ್ಲೂಕುಗಳನ್ನು ಜನವರಿ 2018 ರಿಂದ ಅನ್ವಯವಾಗುವಂತೆ ರಚಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲಾಗಿರುತ್ತದೆ. ಹೊಸ ತಾಲ್ಲೂಕುಗಳಲ್ಲಿ ಕಂದಾಯ ಇಲಾಖೆಯ ವತಿಯಿಂದ ತಾಲ್ಲೂಕು ಕಛೇರಿಯನ್ನು ಮಾತ್ರ ತೆರೆಯಲಾಗಿರುತ್ತದೆ ಮತ್ತು ಇತರೆ ಇಲಾಖೆಗಳು ತಾಲ್ಲೂಕು ಮಟ್ಟದ ಕಛೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತಹಂತವಾಗಿ ತೆರೆಯಲು ಸರ್ಕಾರದ ಆದೇಶ ಸಂಖ್ಯೆ: ಕಂಇ 35 ಭೂದಾಖ 2017 ದಿನಾಂಕ: 06.09.2017 ಮತ್ತು ದಿನಾಂಕ: 16.10.2017 ರಲ್ಲಿ ಅನುಮತಿ ನೀಡಲಾಗಿದೆ.<br><br>ಹೊಸದಾಗಿ ರಚನೆಯಾದ ತಾಲ್ಲೂಕುಗಳ ಕಾರ್ಯಾರಂಭ ಮತ್ತು ಆಡಳಿತಾತ್ಮಕ ಪ್ರಕ್ರಿಯೆಯನ್ನು ಪ್ರಾರಂಭಿಸಲು ಹಾಗೂ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಪ್ರತಿ ತಾಲ್ಲೂಕಿಗೆ ಒಟ್ಟು ರೂ.15.00 ಲಕ್ಷ ಅನುದಾನವನ್ನು ಸಂಬಂಧಿಸಿದ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಕಂಇ 35 ಭೂದಾಖ 2017 ದಿನಾಂಕ: 17.01.2018ರಲ್ಲಿ ಕಛೇರಿಗೆ ಅಗತ್ಯವಾದ ಹುದ್ದೆಗಳನ್ನು ಸೃಜಿಸ ಲಾಗಿದೆ. ತಹಶೀಲ್ದಾರ್ ಗ್ರೇಡ್-1 ಮತ್ತು ಗ್ರೇಡ್-2 ಹುದ್ದೆಗಳನ್ನು ತುಂಬಲು ಕ್ರಮ ವಹಿಸಲಾಗುತ್ತಿದ್ದು, ಶೀಘ್ರವಾಗಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಕ್ರಮ ಜರುಗಿಸಲಾಗುವುದು. ಜನವರಿ 2018 ರಿಂದ 50 ಹೊಸ ತಾಲ್ಲೂಕುಗಳಲ್ಲಿ ತಾಲ್ಲೂಕು ಕಛೇರಿಯನ್ನು ಕಾರ್ಯಾರಂಭ ಮಾಡಲಾಗಿರುತ್ತದೆ. |
| ಆ) | ಹೊಸ ತಾಲ್ಲೂಕು ಕೇಂದ್ರಗಳಲ್ಲಿ ಮೂಲಭೂತ ಸೌಕರ್ಯಗಳಾದ ಕಟ್ಟಡ, ಸಿಬ್ಬಂದಿ ಹಾಗೂ ಹಣಕಾಸಿನ ಕೊರತೆಯನ್ನು ಎದುರಿಸುತ್ತಿದ್ದು, ಇದರ ಸುಧಾರಣೆ ಬಗ್ಗೆ ಸರ್ಕಾರ ಕೈಗೊಂಡ ಕ್ರಮ ಏನು: | |

| | | |
|---|---|---|
| ಇ) | ಹೊಸದಾಗಿ ನಿರ್ಮಿಸಲಾದ ತಾಲ್ಲೂಕುಗಳಲ್ಲಿ ಎಷ್ಟು ಕೇಂದ್ರಗಳು ಸ್ವಂತ ಕಟ್ಟಡಗಳನ್ನು ಹೊಂದಿದೆ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೇಂದ್ರ ಗಳೆಷ್ಟು: (ವಿವರ ನೀಡುವುದು) | ಹೊಸದಾಗಿ ಘೋಷಣೆಯಾದ 50 ತಾಲ್ಲೂಕು ಕೇಂದ್ರಗಳು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿದ್ದ ನಾಡಕಛೇರಿಗಳಲ್ಲಿ, ಇತರೆ ಸರ್ಕಾರಿ ಕಟ್ಟಡ/ಬಾಡಿಗೆ ಕಟ್ಟಡಗಳಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಹೊಸದಾಗಿ ಘೋಷಣೆಯಾದ 50 ತಾಲ್ಲೂಕುಗಳ ಪೈಕಿ ಈವರೆಗೆ ದಕ್ಷಿಣ ಕನ್ನಡ ಜಿಲ್ಲೆಯ ಮೂಡಬಿದರೆ, ಕಡಬ ಹಾಗೂ ಬ್ರಹ್ಮಾವರ ತಾಲ್ಲೂಕು ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಗಳನ್ನು ತಲಾ ರೂ. 10.00 ಕೋಟಿಗಳ ಅಂದಾಜು ಮಿತಿಯಲ್ಲಿ ಕರ್ನಾಟಕ ಗೃಹ ಮಂಡಳಿಯ ಮೂಲಕ ಕೈಗೆತ್ತಿಕೊಳ್ಳಲು ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದ್ದು, ಪ್ರಸ್ತುತ ಸದರಿ ಕಾಮಗಾರಿಗಳ ಆರ್ಕಿಟೆಕ್ಚರಲ್ ಟೆಂಡರ್ ಪ್ರಕ್ರಿಯೆ ಚಾಲ್ತಿಯಲ್ಲಿದೆ.<br><br>ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿ ತಾಲ್ಲೂಕು ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಯನ್ನು ರೂ.10.00 ಕೋಟಿಗಳ ಅಂದಾಜು ಮಿತಿಯಲ್ಲಿ ಲೋಕೋಪಯೋಗಿ ಇಲಾಖೆಯ ಮೂಲಕ ಕೈಗೆತ್ತಿಕೊಳ್ಳಲು ಈಗಾಗಲೇ ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.<br><br>ಉಳಿದಂತೆ ಉಡುಪಿ ಜಿಲ್ಲೆಯ ಕಾಪು, ಹೆಬ್ರಿ, ಬೈಂದೂರು ಹಾಗೂ ಚಾಮರಾಜನಗರ ಜಿಲ್ಲೆಯ ಹನೂರು, ಬಾಗಲಕೋಟೆ ಜಿಲ್ಲೆಯ ಇಳಕಲ್ ತಾಲ್ಲೂಕು ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಗಳ ತಲಾ ರೂ.10.00 ಕೋಟಿಗಳ ಅಂದಾಜುಪಟ್ಟಿ ಮತ್ತು ನಕ್ಷೆಯೊಂದಿಗಿನ ಪ್ರಸ್ತಾವನೆಗಳು ಸ್ವೀಕೃತವಾಗಿದ್ದು, ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.<br><br>ಮುಂದುವರೆದು, ಮೈಸೂರು ಜಿಲ್ಲೆಯ ಸರಗೂರು ತಾಲ್ಲೂಕು ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಗೆ ಸಂಬಂಧಿಸಿದಂತೆ ನೀರಾವರಿ ಇಲಾಖೆಗೆ ಸೇರಿದ ಜಾಗವನ್ನು ಗುರುತಿಸಲಾಗಿದೆ.<br><br>ಉಳಿದ ತಾಲ್ಲೂಕುಗಳಲ್ಲಿ ಮಿನಿ ವಿಧಾನಸೌಧ ಕಟ್ಟಡ ಕಾಮಗಾರಿಗೆ ಸಂಬಂಧಿಸಿದಂತೆ ಸ್ಥಳವನ್ನು ಗುರುತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಈ) | ಹೊಸ ತಾಲ್ಲೂಕು ಕೇಂದ್ರಗಳು ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುವಂತೆ ಮಾಡಲು ಸರ್ಕಾರ ಈ ಸಮಸ್ಯೆಗಳ ಪರಿಹಾರಕ್ಕಾಗಿ ಯಾವ ಕಾಲಮಿತಿ ಯಲ್ಲಿ ಕ್ರಮ ಕೈಗೊಳ್ಳಲಿದೆ? | ಆದಷ್ಟು ಶೀಘ್ರವಾಗಿ ಕ್ರಮ ಕೈಗೊಳ್ಳಲಾಗುವುದು. |

ಕಂಇ 141 ಭೂದಾಪು 2018

(ಆರ್.ವಿ.ದೇಶಪಾಂಡೆ)
ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು